**_ಸಿವಿಲ್ ನ್ಯಾಯಾಧೀಶರು ಮತ್ತು ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯ, ಕೊಪ್ಪ_**

**_ಸಿ.ಸಿ. ನಂಃ 547/2018_**

**_ಫಿರ್ಯಾದುದಾರರು_** ಃ ರಜನಿಕಾಂತ್, ಬಿನ್. ತೀರ್ಥರಾಜ್,
51 ವರ್ಷ, ವ್ಯವಸಾಯ,
ವಾಸಃ ವಿನೋಭ ರಸ್ತೆ, ಸುಂದರನಗರ,
ಕೊಪ್ಪ, ಕೊಪ್ಪ ತಾಲ್ಲೂಕು.

ಃವಿಃ

**_ಆರೋಪಿತರು_** ಃ ವಿ.ಎಸ್. ಗೀತ, ಕೋಮ್. ಯು.ಎಂ. ಸುಬ್ರಮಣ್ಯ,
ವಾಸಃ ಉಳುವೆ, ಕಾವಡಿ ಗ್ರಾಮ, ಶೃಂಗೇರಿ ತಾಲ್ಲೂಕು.

- - -

**_ಆ ಪಾ ದ ನೆ_**

ಆರೋಪಿಯಾದ ನಿಮ್ಮ ವಿರುದ್ಧ ಫಿರ್ಯಾದುದಾರರು ದಾಖಲು ಮಾಡಿರುವ ಫಿರ್ಯಾದು ಏನೆಂದರೆ, ನೀವು ಆರೋಪಿ 20,00,000-00 ರೂ.ಗಳ 25.4.2018ನೇ ದಿನಾಂಕವನ್ನು ನಮೂದಿಸಿರುವ, 305810ನೇ ಸಂಖ್ಯೆಯ, ಕೆನರಾ ಬ್ಯಾಂಕ್, ಶೃಂಗೇರಿ ಶಾಖೆಯ ಒಂದು ಚೆಕ್ಕನ್ನು ಫಿರ್ಯಾದುದಾರರಿಗೆ ಕೊಡಬೇಕಾದ ಹಣದ ಬಾಬ್ತು ನಗದೀಕರಣಕ್ಕಾಗಿ ನೀಡಿದ್ದು, ಫಿರ್ಯಾದುದಾರರು ಅದನ್ನು ಜಮಾವಣೆಗಾಗಿ ಬ್ಯಾಂಕಿನಲ್ಲಿ ಹಾಜರುಪಡಿಸಿದಾಗ, ಬ್ಯಾಂಕಿನವರು ನಿಮ್ಮ ಖಾತೆಯಲ್ಲಿ ಸಾಕಷ್ಟು ಹಣವಿಲ್ಲವೆಂಬ ಹಿಂಬರಹದೊಂದಿಗೆ ಅದನ್ನು ವಾಪಾಸು ಮಾಡಿರುತ್ತಾರೆ ಹಾಗೂ ಈ ಬಗ್ಗೆ ನಿಮಗೆ ವಕೀಲರ ಮೂಲಕ ನೋಟೀಸನ್ನು ಕೊಟ್ಟರೂ ಸಹಾ ನೀವು ಆರೋಪಿ ಚೆಕ್ಕಿನಲ್ಲಿ ಒಳಗೊಂಡ ಹಣವನ್ನು ಮರುಪಾವತಿ ಮಾಡಿರುವುದಿಲ್ಲ. ಆದ್ದರಿಂದ, ನೀವು ಆರೋಪಿ ಫಿರ್ಯಾದುದಾರರಿಗೆ ಮೋಸ ಮಾಡಬೇಕೆನ್ನುವ ಉದ್ದೇಶ ದಿಂದ ಈ ರೀತಿಯ ಚೆಕ್ಕನ್ನು ನೀಡಿ ವರ್ಗಾವಣೀಯ ಲಿಖಿತ ಕಾಯ್ದೆ ಕಲಂ 138ರ ಪ್ರಕಾರ ಶಿಕ್ಷಾರ್ಹವಾದ ಅಪರಾಧವನ್ನು ಎಸಗಿರುತ್ತೀರಿ.

ಪ್ರ:1: ಈಗ ಓದಿ ಹೇಳಿದ ಆಪಾದನೆ ತಿಳಿಯಿತೇ?

ಉ: ತಿಳಿಯಿತು

ಪ್ರ:2: ತಪ್ಪು ಒಪ್ಪಿಕೊಳ್ಳುತ್ತೀರೋ ಅಥವಾ ವಿಚಾರಣೆ ಆಗಬೇಕಾ?

ಉ: ತಪ್ಪು ಮಾಡಿಲ್ಲ, ವಿಚಾರಣೆ ಆಗಬೇಕು

ಈ ಮೇಲ್ಕಂಡ ಆಪಾದನೆಯನ್ನು ನಾನೇ ಸ್ವತಃ ಆರೋಪಿಗೆ ಓದಿ ಹೇಳಿ, ಅವರು ಕೊಟ್ಟ ಉತ್ತರವನ್ನು ಬರೆದುಕೊಂಡಿದ್ದು, ಮೇಲೆ ಹೇಳಿರುವುದು ಸತ್ಯ ಹಾಗೂ ಸರಿಯಾಗಿದೆ ಎಂದು ದೃಢೀಕರಿಸುತ್ತೇನೆ.

ದಿನಾಂಕ: 26ನೇ ದಿವಸ, ಆಗಸ್ಟ್ ಮಾಹೆ, 2019.

ಸಹಿ...... 26.8.2019
(ಕಂಚಿ ಮಾಯಣ್ಣ ಗೌತಮ್)
ಸಿವಿಲ್ ನ್ಯಾಯಾಧೀಶರು ಮತ್ತು
ಪ್ರದನ್ಯಾದಂ;ಕೊಪ್ಪ.